ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ಸದಸ್ಯರ ಹೆಸರು	:	ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)
ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ	:	**308**
ಉತ್ತರಿಸಬೇಕಾದ ದಿನಾಂಕ	:	09.02.2021
ಉತ್ತರಿಸಬೇಕಾದ ಸಚಿವರು	:	ವಸತಿ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ.	ಪ್ರಧಾನ ಮಂತ್ರಿ ಆವಾಸ್ ಯೋಜನೆ (ಪಿಎಂಎವೈ) ಅಡಿಯಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ನಿರ್ಮಿಸಲಾಗುತ್ತಿರುವ ಪ್ರತಿ ವಸತಿ ಘಟಕ ನಿರ್ಮಾಣ ವೆಚ್ಚವೆಷ್ಟು;	ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ) ಯಡಿ ಗ್ರಾಮೀಣ ಪ್ರದೇಶಗಳಲ್ಲಿ ನಿರ್ಮಿಸಲಾಗುತ್ತಿರುವ ಪ್ರತಿ ವಸತಿ ಘಟಕ ನಿರ್ಮಾಣದ ವೆಚ್ಚವು ಸಾಮಾನ್ಯವಾಗಿ ರೂ. 3.00 ಲಕ್ಷಗಳಿಂದ ರೂ. 5.00 ಲಕ್ಷಗಳವರೆಗೆ ಇರುತ್ತದೆ.
		ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) ಯಡಿ ನಗರ ಪ್ರದೇಶಗಳಲ್ಲಿ ಬಿ.ಎಲ್.ಸಿ. ಮತ್ತು ಎ.ಹೆಚ್.ಪಿ. ಘಟಕದಡಿ ನಿರ್ಮಿಸಲಾಗುತ್ತಿರುವ ಪ್ರತಿ ವಸತಿ ಘಟಕ ನಿರ್ಮಾಣದ ವೆಚ್ಚವು ಸಾಮಾನ್ಯವಾಗಿ ರೂ. 4.00 ಲಕ್ಷಗಳಿಂದ ರೂ. 10.60 ಲಕ್ಷಗಳವರೆಗೆ ಇರುತ್ತದೆ.
ಆ..	ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿನ ನಿರ್ಮಾಣದ ವೆಚ್ಚವು ವಿಭಿನ್ನವಾಗಿದೆಯೇ; ಹಾಗಿದ್ದಲ್ಲಿ, ಎರಡೂ ಪ್ರದೇಶಗಳಿಗೆ ಹಂಚಿಕೆಯನ್ನು ಸಮನಾಗಿಸಲು ಯಾವುದಾದರೂ ಯೋಜನೆಯನ್ನು ರೂಪಿಸಲಾಗಿದೆಯೇ;	ಹೌದು, ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿನ ನಿರ್ಮಾಣದ ವೆಚ್ಚವು ವಿಭಿನ್ನವಾಗಿರುತ್ತದೆ. ಗ್ರಾಮೀಣ ಪ್ರದೇಶಗಳಲ್ಲಿ ವಿವಿಧ ವಸತಿ ಯೋಜನೆಗಳಡಿ ಸರ್ಕಾರದಿಂದ ಮಂಜೂರಾದ ಮನೆಗಳನ್ನು ಸ್ಥಳೀಯವಾಗಿ ಲಭ್ಯವಿರುವ ಕಚ್ಚಾ ವಸ್ತುಗಳನ್ನು ಉಪಯೋಗಿಸಿಕೊಂಡು ಫಲಾನುಭವಿಗಳೇ ಸ್ವತಃ ನಿರ್ಮಿಸಿಕೊಳ್ಳುತ್ತಿದ್ದಾರೆ. ನಗರ ಪ್ರದೇಶಗಳಲ್ಲಿಯೂ ಕೂಡ ಫಲಾನುಭವಿಗಳು ಮನೆಗಳನ್ನು ಸ್ಥಳೀಯವಾಗಿ ಲಭ್ಯವಿರುವ ಕಚ್ಚಾ ವಸ್ತುಗಳನ್ನು ಉಪಯೋಗಿಸಿಕೊಂಡು ತಾವೇ ಸ್ವತಃ ನಿರ್ಮಿಸಿಕೊಳ್ಳುತ್ತಿದ್ದಾರೆ. ಅಷ್ಟೇ ಅಲ್ಲದೆ, ಅನುಷ್ಠಾನ ಸಂಸ್ಥೆಗಳು ನಿವೇಶನರಹಿತ ಕುಟುಂಬಗಳಿಗೆ ಸರ್ಕಾರದ ಜಮೀನುಗಳಲ್ಲಿ ಬಹುಮಹಡಿ ಮಾದರಿಯಲ್ಲಿ ಗುತ್ತಿಗೆದಾರರ ಮೂಲಕ ಮನೆಗಳನ್ನು ನಿರ್ಮಿಸಿ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸಿ, ಅವುಗಳನ್ನು ಹಂಚಿಕೆ ಮಾಡುತ್ತಿವೆ. ಗ್ರಾಮೀಣ ಮತ್ತು ನಗರ ಪ್ರದೇಶದ ಫಲಾನುಭವಿಗಳ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಪರಿಸ್ಥಿತಿ ಹಾಗೂ ಅವರ ಜೀವನ ಶೈಲಿಯಲ್ಲಿನ ನಿಯತಾಂಕಗಳಲ್ಲಿ ವ್ಯತ್ಯಾಸವಿರುವುದರಿಂದ, ಯೋಜಿತ ವೆಚ್ಚವನ್ನು ಒಂದೇ ನಿಯತಾಂಕಗಳಲ್ಲಿ ಅಳೆಯುವ ಅಥವಾ ಸದರಿ ಎರಡೂ ಪ್ರದೇಶಗಳಿಗೆ ಹಂಚಿಕೆಯನ್ನು ಸಮನಾಗಿಸಲು ಯೋಜನೆಯನ್ನು ರೂಪಿಸುವ ಪ್ರಸ್ತಾವನೆಯು / ವಿಚಾರವು ಸರ್ಕಾರದ ಮುಂದೆ ಇರುವುದಿಲ್ಲ.

ಕ್ರ. ಸಂ	ಪ್ರಶ್ನೆ	ಉತ್ತರ
		ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಸ್ (ನಗರ) ಯೋಜನೆಯನ್ನು ರಾಜ್ಯ ಸರ್ಕಾರದ ಯೋಜನೆಗಳಾದ ವಾಜಪೇಯಿ ನಗರ ವಸತಿ ಯೋಜನೆ ಮತ್ತು ಡಾ: ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆಯೊಂದಿಗೆ ಸಂಯೋಜನೆಗೊಳಿಸಿ, ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಧಾನ ಮಂತ್ರಿ ಆವಾಸ್ ಯೋಜನೆ ಮತ್ತು ಇತರೆ ವಸತಿ ಯೋಜನೆಗಳಿಗೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರವು ನೀಡುತ್ತಿರುವ ಸಹಾಯಧನದ ವಿವರವು ಈ ಕೆಳಗಿನಂತಿದೆ:- (ರೂ. ಲಕ್ಷಗಳಲ್ಲಿ)

ಯೋಜನೆ	ಗ್ರಾಮೀಣ			
	ಕೇಂದ್ರದ ಪಾಲು		ರಾಜ್ಯದ ಪಾಲು	
	ಸಾಮಾನ್ಯ / ಅ.ಸಂ	ಪ.ಜಾ. / ಪ.ಪಂ.	ಸಾಮಾನ್ಯ / ಅ.ಸಂ.	ಪ.ಜಾ. / ಪ.ಪಂ.
ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ)	0.72	0.72	0.48	0.78
ಡಾ: ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ	-	-	-	1.75

ಯೋಜನೆ	ನಗರ			
	ಕೇಂದ್ರದ ಪಾಲು		ರಾಜ್ಯದ ಪಾಲು	
	ಸಾಮಾನ್ಯ / ಅ.ಸಂ	ಪ.ಜಾ. / ಪ.ಪಂ.	ಸಾಮಾನ್ಯ / ಅ.ಸಂ.	ಪ.ಜಾ. / ಪ.ಪಂ.
ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ)	1.50	1.50	-	-
ಡಾ: ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ	-	-	-	2.00
ವಾಜಪೇಯಿ ನಗರ ವಸತಿ ಯೋಜನೆ	-	-	1.20	-

ಕ್ರ. ಸಂ	ಪ್ರಶ್ನೆ	ಉತ್ತರ
ಇ	ಉಭಯ ಪ್ರದೇಶಗಳ ನಿರ್ಮಾಣ ಸಾಮಗ್ರಿಗಳನ್ನು ಒಂದೇ ಸ್ಥಳದಿಂದ ತರುವುದರಿಂದ ಎರಡೂ ಪ್ರದೇಶಗಳ ಯೋಜಿತ ವೆಚ್ಚವನ್ನು ಅದೇ ನಿಯತಾಂಕಗಳಲ್ಲಿ ಅಳೆಯುವುದು ಸಾಧುವಾಗಿದ್ದು, ಈ ಬಗ್ಗೆ ಸರ್ಕಾರ ಪರಿಶೀಲಿಸುವುದೇ?	ಪ್ರಧಾನ ಮಂತ್ರಿ ಆವಾಸ್ (ನಗರ) ಮತ್ತು (ಗ್ರಾಮೀಣ) ಯೋಜನೆಗಳು ಕೇಂದ್ರ ಪುರಸ್ಕೃತ ಯೋಜನೆಗಳಾಗಿರುವುದರಿಂದ, ಸದರಿ ಯೋಜನೆಗಳಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರವು ಹೊರಡಿಸಿರುವ ಮಾರ್ಗಸೂಚಿಗಳಿಗೆ ಅನುಗುಣವಾಗಿ ಅವುಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

[ಸಂಖ್ಯೆ: ವಇ 25 ಹೆಚ್‌ಎಫ್‌ಎ 2021

(ವಿ. ಸೋಮಣ್ಣ)
ವಸತಿ ಸಚಿವರು